,4

ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:	:	2087
ಮಾನ್ಯ ಸದಸ್ಯರ ಹೆಸರು	:	ಶ್ರೀ ಅರುಣ್ ಶಹಾಪುರ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ಸಚಿವರು	:	ಮುಖ್ಯಮಂತ್ರಿ
ಉತ್ತರಿಸಬೇಕಾದ ದಿನಾಂಕ	:	17-03-2022

	ಪ್ರಶ್ನೆ	ಉತ್ತರ
(ಅ)	ಅನುದಾನ ರಹಿತ ಶಾಲಾ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸುವ ಕುರಿತು ಆರ್ಥಿಕ ಇಲಾಖೆಯ ಸ್ಪಷ್ಟ ನಿಲುವೇನು; ಈ ಕುರಿತು ಇರುವ ನೀತಿ ನಿಯಮಗಳೇನು;	ಕರ್ನಾಟಕ ಶಿಕ್ಷಣ ಅಧಿನಿಯಮ, 1983ರ ಪ್ರಕರಣ 49ರಲ್ಲಿ ಕಲ್ಪಿಸಿರುವ ಉಪಬಂಧದನ್ವಯ ರಾಜ್ಯ ಸರ್ಕಾರವು ತನ್ನ ಆರ್ಥಿಕ ಸಾಮರ್ಥ್ಯದ ಪರಿಮಿತಿಯೊಳಗೆ ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ಸಹಾಯಾನುದಾನ ಮೀಸಲಿಡಲು ಅವಕಾಶವಿರುತ್ತದೆ. ಸರ್ಕಾರದ ನೀತಿ ಹಾಗೂ ಸಹಾಯಾನುದಾನ ಸಂಹಿತೆ ಪ್ರಕಾರ ರಾಜ್ಯ ಸರ್ಕಾರವು ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳ ಬೋಧಕ/ಬೋಧಕೇತರ ಸಿಬ್ಬಂದಿಗಳಿಗೆ ವೇತನ ಸಹಾಯಾನುದಾನ ನೀಡಲು ಅವಕಾಶವಿರುತ್ತದೆ. ಅದರಂತೆ, ದಿನಾಂಕ:01-06-1987 ರಿಂದ 1992-93ನೇ ಶೈಕ್ಷಣಿಕ ಸಾಲಿನ ಅವಧಿಯಲ್ಲಿ ಪ್ರಾರಂಭಿಸಿ ಯಾವುದೇ ವಿಚ್ಛಿನ್ನತೆ ಇಲ್ಲದೆ ಸತತವಾಗಿ ನಡೆಸಲಾಗುತ್ತಿರುವ ಖಾಸಗಿ ಪ್ರಾಥಮಿಕ ಶಾಲೆಗಳು, ಪ್ರೌಢಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳನ್ನು ಕೆಲವೊಂದು ಷರತ್ತಿಗಳಿಗೊಳಪಟ್ಟು ಸಹಾಯಾನುದಾನಕ್ಕೆ ಒಳಪಡಿಸಲು ಸರ್ಕಾರದ ಆದೇಶ ಸಂಖ್ಯೆ:ಇಡಿ 56 ಪಿಎಂಸಿ 2005, ದಿನಾಂಕ:06-10-2007ರಲ್ಲಿ ಅವಕಾಶ ಕಲ್ಪಿಸಲಾಗಿರುತ್ತದೆ. ಹಾಗೂ ಸರ್ಕಾರದ ಆದೇಶ ಸಂಖ್ಯೆ: ಇಡಿ 217 ಪಿಎಂಸಿ 2008, ದಿನಾಂಕ:08-09-2008ರಲ್ಲಿ 1993-94 ಮತ್ತು 1994-95ನೇ ಶೈಕ್ಷಣಿಕ ಸಾಲಿನ ಅವಧಿಯಲ್ಲಿ ಪ್ರಾರಂಭಗೊಂಡ ಶಾಲಾ ಕಾಲೇಜುಗಳನ್ನು ಸಹಾಯಾನುದಾನಕ್ಕೆ ಒಳಪಡಿಸಲು ಅವಕಾಶ ಕಲ್ಪಿಸಲಾಗಿರುತ್ತದೆ.
(ಆ)	2022ರ ಬಜೆಟ್ ನಲ್ಲಿ ಈ ಕುರಿತು ಯಾವುದೇ ಕ್ರಮ ಕೈಗೊಳ್ಳದಿರಲು ಕಾರಣಗಳೇನು?	2020ರಲ್ಲಿ ಉದ್ಭವಿಸಿದ ಕೋವಿಡ್-19 ಸಾಂಕ್ರಾಮಿಕ ರೋಗವನ್ನು ತಡೆಗಟ್ಟುವ ಸಲುವಾಗಿ ಲಾಕ್‌ಡೌನ್ ಜಾರಿ ಮಾಡಿದ್ದರಿಂದಾಗಿ ರಾಜಸ್ವ ಸಂಗ್ರಹಣೆಯಲ್ಲಿ ತೀವ್ರ ಕುಸಿತ ಉಂಟಾಗಿದ್ದುದರಿಂದ ಆರ್ಥಿಕ ಸ್ಥಿತಿಯನ್ನು ಸುಸ್ಥಿತಿಗೆ ತರುವ

ಇ)	ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಉನ್ನತ ಶಿಕ್ಷಣ ಇಲಾಖೆ ಹಾಗೂ ಕೌಶಲ್ಯಾಭಿವೃದ್ಧಿ ಇಲಾಖೆಯ ಅನುದಾನ ರಹಿತ ಐಟಿಐ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸಲು ಅನುದಾನ ಕೋರಿ ಪ್ರಸ್ತಾವನೆಗಳು ಆಗಾಗ್ಗೆ ಆರ್ಥಿಕ ಇಲಾಖೆಗೆ ಬಂದರೂ ಸಹ ಸರ್ಕಾರ ಯಾವುದೇ ಕ್ರಮಕೈಗೊಳ್ಳದಿರಲು ಕಾರಣಗಳೇನು; (ವಿವರಣೆ ಹಾಗೂ ಇರುವ ಸಮಸ್ಯೆಗಳ ಬಗ್ಗೆ ಮಾಹಿತಿ ನೀಡುವುದು)	ನಿಟ್ಟಿನಲ್ಲಿ ಮತ್ತು ಇದಕ್ಕಾಗಿ ಸರ್ಕಾರದ ವೆಚ್ಚದ ಬಾಬ್ತಿನಲ್ಲಿ ಮಿತವ್ಯಯ ಪಾಲಿಸುವುದು ಅನಿವಾರ್ಯವಾಗಿದ್ದುದರಿಂದ ಶಿಕ್ಷಣ ಇಲಾಖೆಯನ್ನೊಳಗೊಂಡಂತೆ ಇತರ ಎಲ್ಲಾ ಇಲಾಖೆಗಳ ವ್ಯಾಪ್ತಿಯಲ್ಲಿನ ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಹಾಗೂ ಈಗಾಗಲೇ ವೇತನಾನುದಾನಕ್ಕೆ ಒಳಪಟ್ಟ ಶಿಕ್ಷಣ ಸಂಸ್ಥೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಕುರಿತಂತೆ ಸುತ್ತೋಲೆ ಸಂಖ್ಯೆ:ಆಇ 157 ವೆಚ್ಚ-8/2020, ದಿನಾಂಕ:10-06-2020ರಲ್ಲಿ ನಿರ್ಬಂಧ ವಿಧಿಸಿ ಸೂಚನೆಗಳನ್ನು ನೀಡಲಾಗಿರುತ್ತದೆ.
(ಈ)	ಅನೇಕ ಬೋಧಕ ಹಾಗೂ ಬೋಧಕೇತರರು ಅನುದಾನದ ನಿರೀಕ್ಷೆಯಲ್ಲಿದ್ದು, ಇವರಿಗೆ ಅನುದಾನ ಒದಗಿಸುವ ಕುರಿತು ಆರ್ಥಿಕ ಇಲಾಖೆಯು ಕ್ರಮ ವಹಿಸುವುದೇ; ಈ ವರ್ಗದವರು ಹೋರಾಟಗಳನ್ನು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು?	ಆರ್ಥಿಕ ಮಿತವ್ಯಯ ಆದೇಶದ ಹೊರತಾಗಿಯೂ ಶೈಕ್ಷಣಿಕ ಹಿತದೃಷ್ಟಿ ಮತ್ತು ಅಭ್ಯರ್ಥಿಗಳ ವಯೋಮಿತಿ ಮೀರುವುದನ್ನು ಪರಿಗಣಿಸಿ, ಖಾಸಗಿ ಅನುದಾನಿತ ಪ್ರೌಢಶಾಲೆ, ಪದವಿ ಪೂರ್ವ ಮತ್ತು ಪದವಿ ಕಾಲೇಜುಗಳಲ್ಲಿ ದಿನಾಂಕ: 31-12-2015ರ ಅಂತ್ಯಕ್ಕೆ ನಿವೃತ್ತಿ, ಮರಣ, ರಾಜೀನಾಮೆ ಇತರೆ ಕಾರಣಗಳಿಂದ ಖಾಲಿ ಉಂಟಾಗಿರುವ ಹುದ್ದೆಗಳ ಪೈಕಿ ಈಗಾಗಲೇ ಸರ್ಕಾರದಿಂದ ಅನುಮೋದನೆಗೊಂಡು ನೇಮಕಾತಿ ಪ್ರಕ್ರಿಯೆಯು ಇಲಾಖೆಯಲ್ಲಿ ಅಂತಿಮ ಹಂತದಲ್ಲಿ ಬಾಕಿ ಇರುವ ಕ್ರಮವಾಗಿ 257, 173, ಮತ್ತು 371 ಬೋಧಕ ಹುದ್ದೆಗಳಿಗೆ ನೇಮಕಾತಿ ಆದೇಶವನ್ನು 2021-22 ಶೈಕ್ಷಣಿಕ ವರ್ಷ ಪ್ರಾರಂಭಗೊಂಡ ನಂತರ ನೀಡಲು ಸಹಮತಿಸಲಾಗಿರುತ್ತದೆ.

ಸಂಖ್ಯೆ: ಆಇ 217 ವೆಚ್ಚ-8/2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ